ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
Bangalore Development Authority

000135

JE-P-2.

ಸಂಖ್ಯೆ:
No. ಬೆಂಅಪ್ರಾ/ನಯೋಸ/DLP-32/2019-20/ 890 /2020-21.

ದಿನಾಂಕ: 07/11/2020
Date:

AEE P2 9/11

## ಕಾರ್ಯಾದೇಶ

ವಿಷಯ:- ಬೆಂಗಳೂರು ನಗರದಲ್ಲಿ ಆರ್ಥಿಕವಾಗಿ ದುರ್ಬಲ ವರ್ಗದವರಿಗಾಗಿ 01 ಲಕ್ಷ ಬಹುಮಹಡಿ ವಸತಿ ಯೋಜನೆ ಯಡಿ ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೊಡ್ಡ ನಾಗಮಂಗಲ ಗ್ರಾಮದ ಸರ್ವೆ ನಂ. 11 ರಲ್ಲಿನ 06 ಎಕರೆ 20 ಗುಂಟೆ ವಿಸ್ತೀರ್ಣಕ್ಕೆ ವಸತಿ ಗೃಹಗಳ ಬಹುಮಹಡಿ ಅಭಿವೃದ್ಧಿ ಯೋಜನಾ ನಕ್ಷೆಗೆ ಮಂಜೂರಾತಿಯನ್ನು ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ರವರು ಕೋರಿರುವ ಬಗ್ಗೆ.

ಉಲ್ಲೇಖ

1. ಅರ್ಜಿದಾರರ ಮನವಿ ದಿನಾಂಕ 19.12.2019.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 132/2019, ದಿನಾಂಕ 17.01.2020 ಮತ್ತು 18.01.2020.
3. ಸರ್ಕಾರದ ಅಧಿಸೂಚನೆ ಸಂಖ್ಯೆ UDD 10 TTP 2018, ದಿನಾಂಕ 04.05.2020.
4. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-32/MIS-2127/167/2019-20, ದಿನಾಂಕ 17.06.2020
5. ಪ್ರಾಧಿಕಾರದ ಆವರಣದಲ್ಲಿರುವ ಕೆನರಾ ಬ್ಯಾಂಕ್ ಶಾಖೆಯ ಚಲನ್ ಸಂಖ್ಯೆ 660, ದಿನಾಂಕ 25.06.2020.
6. ಈ ಕಛೇರಿಯ ಅ.ಟಿ. ಸಂಖ್ಯೆ ಬೆಂಅಪ್ರಾ/ನಯೋಸ/DLP-32/2019-20/253/2020-21, ದಿನಾಂಕ 01.07.2020.
7. ಅಧಿಕ ಜಿಲ್ಲಾ ನೊಂದಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ರವರ ಕಛೇರಿಯ 1ನೇ ಪುಸ್ತಕದ ದಸ್ತಾವೇಜು ನಂಬರ್ BDA-1-01139-2020-21 ಆಗಿ CD ನಂ. BDAD638 ದಿನಾಂಕ 13.08.2020 ರಂತೆ ನೊಂದಾಯಿಸಿರುವ ಪರಿತ್ಯಾಜನ ಪತ್ರ.

ಬೆಂಗಳೂರು ನಗರದಲ್ಲಿ ಆರ್ಥಿಕವಾಗಿ ದುರ್ಬಲ ವರ್ಗದವರಿಗಾಗಿ 01 ಲಕ್ಷ ಬಹುಮಹಡಿ ಯೋಜನೆ ಯಡಿ ಬೆಂಗಳೂರು ದಕ್ಷಿಣ ತಾಲ್ಲೂಕು, ಬೇಗೂರು ಹೋಬಳಿ, ದೊಡ್ಡ ನಾಗಮಂಗಲ ಗ್ರಾಮದ ಸರ್ವೆ ನಂ. 11 ರಲ್ಲಿನ 06 ಎಕರೆ 20 ಗುಂಟೆ ವಿಸ್ತೀರ್ಣಕ್ಕೆ ವಸತಿ ಗೃಹಗಳ ಬಹುಮಹಡಿ ಅಭಿವೃದ್ಧಿ ಯೋಜನಾ ನಕ್ಷೆಗೆ ಮಂಜೂರಾತಿಯನ್ನು ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ ರವರು ಕೋರಿರುತ್ತಾರೆ.



Scanned with CamScanner

ಪ್ರಸ್ತಾವನೆಯನ್ನು ಪರಿಶೀಲಿಸಿ, ವಿಷಯವನ್ನು ದಿನಾಂಕ 17.01.2020 ಮತ್ತು 18.01.2020 ರಂದು ನಡೆದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯಲ್ಲಿ ವಿಷಯ ಸಂಖ್ಯೆ 132/2019 ರಲ್ಲಿ ಮಂಡಿಸಿ ಚರ್ಚಿಸಲಾಗಿರುತ್ತದೆ. "ಚರ್ಚೆಯ ನಂತರ ಇದೊಂದು ಆರ್ಥಿಕವಾಗಿ ದುರ್ಬಲ ವರ್ಗದವರಿಗಾಗಿ 01 ಲಕ್ಷ ಬಹುಮಹಡಿ ಮನೆಗಳನ್ನು ನಿರ್ಮಿಸುವ ಸಂಬಂಧ ಸರ್ಕಾರದಿಂದ ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತರವರಿಗೆ ಭೂಮಿ ಮಂಜೂರಾಗಿರುವುದರಿಂದ ಸದರಿ ಸಂಸ್ಥೆಯು ಪ್ರಾಧಿಕಾರದ ವಲಯ ನಿಯಮಾವಳಿಯಲ್ಲಿ ಕೆಲವು ರಿಯಾಯಿತಿಗಳನ್ನು ಕೋರಿರುತ್ತಾರೆ ಹಾಗೂ ಸದರಿ ರಿಯಾಯಿತಿ ಸಂಬಂಧ ಸರ್ಕಾರದ ಮಟ್ಟದಲ್ಲಿ ವಲಯ ನಿಯಮಾವಳಿಗೆ ಕೆಟಿಸಿಪಿ ಕಾಯ್ದೆ ಕಲಂ 13-E ರಡಿಯಲ್ಲಿ ತಿದ್ದುಪಡಿ ಪ್ರಸ್ತಾವನೆಗೆ ಕ್ರಮಕೈಗೊಳ್ಳಲಾಗಿರುವುದನ್ನು ಸಂಸ್ಥೆಯ ಮುಖ್ಯಸ್ಥರು ಸಭೆಯಲ್ಲಿನ ಅಧ್ಯಕ್ಷರಿಗೆ ಮತ್ತು ಸದಸ್ಯರಿಗೆ ವಿವರಿಸಿರುತ್ತಾರೆ.

ಅದರಲ್ಲಿ ಮುಖ್ಯವಾಗಿ ಪ್ರಸ್ತಾವಿತ ಜಾಗಕ್ಕೆ ರಸ್ತೆ ಅಗಲ, FAR, Setback ಮತ್ತು RMP-2015 ರಂತೆ ಇರುವ ಭೂಉಪಯೋಗಗಳ ಬಗ್ಗೆ ಚರ್ಚಿಸಬೇಕಾಗಿರುವುದನ್ನು ಸಭೆಯ ಗಮನಕ್ಕೆ ತರಲಾಯಿತು.

ಚರ್ಚೆಯ ನಂತರ Setback ನಲ್ಲಿ ಯಾವುದೇ ಸಡಿಲಿಕೆ ಮಾಡದೆ ಸರ್ಕಾರದ ಮಟ್ಟದಲ್ಲಿ ಕೆಟಿಸಿಪಿ ಕಾಯ್ದೆ ಕಲಂ 13-E ರಡಿಯಲ್ಲಿ ಉದ್ದೇಶಿಸಿರುವ ವಲಯ ನಿಯಮಾವಳಿ ತಿದ್ದುಪಡಿ ಪ್ರಸ್ತಾವನೆಗೆ ಒಳಪಟ್ಟು ಹಾಗೂ ಪ್ರಸ್ತಾಪಿತ ಜಾಗಗಳು ಬರುವ ಪ್ರದೇಶಗಳ ರಸ್ತೆಗಳನ್ನು RMP-2031 ರಲ್ಲಿ ಕನಿಷ್ಠ 18.00ಮೀ ಅಗಲಕ್ಕೆ ವಿಸ್ತರಿಸಲು ಹಾಗೂ ಸದರಿ 18.00 ಮೀಟರ್ ಅಗಲದ ಪ್ರಸ್ತಾಪಿತ ರಸ್ತೆಯ ಪ್ರಾರಂಭ ಮತ್ತು ಮತ್ತೊಂದು ರಸ್ತೆಗೆ ಕೂಡುವವರೆಗಿನ ರಸ್ತೆಯ ಎರಡೂ ಬದಿಗಳಲ್ಲಿ ಬರುವ ಅಭಿವೃದ್ಧಿಗಳಿಗೆ 18.00 ಮೀಟರ್ ಅಗಲದ ರಸ್ತೆಗೆ ಬೇಕಾಗುವ ಜಾಗವನ್ನು ಅಭಿವೃದ್ಧಿದಾರರಿಂದ ಪುಕ್ಕಟೆಯಾಗಿ ಪ್ರಾಧಿಕಾರ / ಸ್ಥಳೀಯ ಸಂಸ್ಥೆಗೆ ಹಸ್ತಾಂತರಿಸಿಕೊಳ್ಳುವ ಮತ್ತು ಭೂಉಪಯೋಗವನ್ನು ವಸತಿಗಾಗಿ ಕಾಯ್ದಿರಿಸುವ ನಿಬಂಧನೆಗೆ ಒಳಪಟ್ಟು ಕೆರೆ / ನಾಲಾಗಳಿಗೆ ವಲಯ ನಿಯಮಾವಳಿಯಂತೆ ಸೂಕ್ತ ಬಫರ್ ಕಾಯ್ದಿರಿಸುವ ಷರತ್ತಿಗೆ ಒಳಪಟ್ಟು ಪ್ರಸ್ತಾವನೆಗಳನ್ನು ವಲಯ ನಿಯಮಾವಳಿ ಅಡಿಯಲ್ಲಿ ಪರಿಶೀಲಿಸಿ ಷರತ್ತು ಬದ್ಧ ಅನುಮೋದನೆ ನೀಡಲು ಆಯುಕ್ತರಿಗೆ ಅಧಿಕಾರ ಪ್ರತ್ಯಾಯೋಜಿಸಲು ತೀರ್ಮಾನಿಸಲಾಯಿತು".

ಉಲ್ಲೇಖ [3] ರ ಸರ್ಕಾರದ ಅಧಿಸೂಚನೆ ಮತ್ತು ಸರ್ಕಾರದಿಂದ ಅನುಮೋದನೆಗೊಂಡ ಮಹಾ ಯೋಜನೆ - 2015 ರ ವಲಯ ನಿಯಮಾವಳಿಯಂತೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಅರ್ಜಿದಾರರಿಂದ ಪಡೆಯಲಾಗಿರುತ್ತದೆ.

ಪ್ರಾಧಿಕಾರದ ಸಮಿತಿ ಸಭೆಯ ತೀರ್ಮಾನದಂತೆ ವಸತಿ ಅಭಿವೃದ್ಧಿ ಯೋಜನೆ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ (4) ರ ಈ ಕಛೇರಿಯ ಪತ್ರದಂತೆ ವಿವಿಧ ಶುಲ್ಕಗಳ ಬಾಬ್ತು ₹. 15,67,500/-[₹. ಹದಿನೈದು ಲಕ್ಷದ ಅರವತ್ತೇಳು ಸಾವಿರದ ಐದುನೂರು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸುವಂತೆ ತಿಳಿಸಲಾಗಿತ್ತು.

ಅದರಂತೆ ಉಲ್ಲೇಖ (5) ರಲ್ಲಿ ಅರ್ಜಿದಾರರು ದಿನಾಂಕ 25.06.2020 ರಂದು ₹. 15,67,500/-[₹. ಹದಿನೈದು ಲಕ್ಷದ ಅರವತ್ತೇಳು ಸಾವಿರದ ಐದುನೂರು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. ಕ್ರಮವಾಗಿ 660 ರ ಮೂಲಕ ಪಾವತಿಸಿರುತ್ತಾರೆ. ಸದರಿ ಮೊತ್ತವು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದಿಂದ ದಿನಾಂಕ 28.07.2020 ರಂದು ದೃಢೀಕರಿಸಿರುತ್ತಾರೆ.

Scanned with CamScanner

ಉಲ್ಲೇಖ (6) ರ ಈ ಕಛೇರಿ ಪತ್ರದಲ್ಲಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಪ್ರಸ್ತಾಪಿಸಿರುವ ಉದ್ಯಾನವನ ಮತ್ತು ಬಯಲು ಜಾಗ, ರಸ್ತೆ ವಿಸ್ತರಣೆ ಮತ್ತು RMP 2015 ರಂತೆ ಪ್ರಸ್ತಾಪಿಸಿರುವ ರಸ್ತೆ ಪ್ರದೇಶಗಳನ್ನು ಪ್ರಾಧಿಕಾರಕ್ಕೆ ಪರಿತ್ಯಜನಾ ಪತ್ರದ ಮೂಲಕ ಪುಕ್ಕಟೆಯಾಗಿ ಹಸ್ತಾಂತರಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರು (ಪೂರ್ವ) ರವರಿಗೆ ಮತ್ತು ಸದರಿ ಪ್ರದೇಶಗಳನ್ನು ಹಸ್ತಾಂತರಿಕೊಡುವಂತೆ ಅರ್ಜಿದಾರರಿಗೆ ತಿಳಿಸಲಾಗಿರುತ್ತದೆ.

ಪ್ರಾಧಿಕಾರದ ಕಾರ್ಯಪಾಲಕ ಅಭಿಯಂತರರು (ಪೂರ್ವ) ರವರು ಸದರಿ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ ಮತ್ತು ಬಯಲು ಜಾಗ , ರಸ್ತೆ ವಿಸ್ತರಣೆ ಮತ್ತು RMP 2015 ರಂತೆ ಪ್ರಸ್ತಾಪಿಸಿರುವ ರಸ್ತೆ ಪ್ರದೇಶಗಳನ್ನು ಉಲ್ಲೇಖ (7) ರಲ್ಲಿನ ಪರಿತ್ಯಾಜನಾ ಪತ್ರದಂತೆ ಪ್ರಾಧಿಕಾರಕ್ಕೆ ಹಸ್ತಾಂತರಿಸಿಕೊಳ್ಳಲಾಗಿದ್ದು, ಪರಿತ್ಯಾಜನಾ ಪತ್ರದ ಪ್ರತಿಯನ್ನು ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ನಗರದಲ್ಲಿ ಆರ್ಥಿಕವಾಗಿ ದುರ್ಬಲ ವರ್ಗದವರಿಗಾಗಿ 01 ಲಕ್ಷ ಬಹುಮಹಡಿ ಮನೆಗಳನ್ನು ನಿರ್ಮಿಸುವ ಸಂಬಂಧ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ UDD 10 TTP 2018, ದಿನಾಂಕ 04.05.2020 ಮತ್ತು ಸರ್ಕಾರದಿಂದ ಅನುಮೋದನೆಗೊಂಡ ಮಹಾ ಯೋಜನೆ 2015 ರ ವಲಯ ನಿಯಮಾವಳಿಯಂತೆ ತಯಾರಿಸಲಾಗಿದ್ದು ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಅನುಮೋದನೆ ನೀಡಲಾಗಿದೆ.

| | |
|---|---|
| 1 | ರೇರಾ ಅಧಿನಿಯಮ, 2016 ಹಾಗೂ ಸಂಬಂಧಿತ ನಿಯಮಗಳು, 2017 ರನ್ವಯ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೊಂದಣಿ ಮಾಡಿಸುವುದು. |
| 2 | ಜಿಲ್ಲಾಧಿಕಾರಿಯವರ ಆದೇಶ ಸಂಖ್ಯೆ ಎಲ್ ಎಲ್ ಡಿ [ಜಿ] ಸಿ.ಆರ್. 72/17-18, ದಿನಾಂಕ 14.12.2017 ರ ಆದೇಶದಲ್ಲಿ ವಿಧಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು. |
| 3 | ಮಾನ್ಯ ಲೋಕಾಯುಕ್ತ / ACB ಯಲ್ಲಿ ಯಾವುದೇ ತಕರಾರು ಉದ್ಭವಿಸಿದಲ್ಲಿ ಅರ್ಜಿದಾರರೇ ಪರಿಹರಿಸಿಕೊಳ್ಳತಕ್ಕದ್ದು. |
| 4 | ವಿವರವಾದ ಕಟ್ಟಡ ನಕ್ಷೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು. |
| 5 | ಪ್ರಾಧಿಕಾರವು ಅನುಮೋದಿಸಿರುವ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |
| 6 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸುವ ಪ್ರದೇಶದಲ್ಲಿ ವಿವಿದ ಜಾತಿಯ ಮರಗಿಡಗಳನ್ನು ಬೆಳಸಿ ಅಭಿವೃದ್ಧಿ ಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 7 | ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ತೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ತೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು. |
| 8 | ವಿವರವಾದ ಕಟ್ಟಡ ನಕ್ಷೆಗಳನ್ನು ಅನುಮೋದಿಸುವ ಸಕ್ಷಮ ಪ್ರಾಧಿಕಾರವು Structural Stability ಬಗ್ಗೆ ಹಾಗೂ ವಿವಿಧ ಇಲಾಖೆಗಳು ನೀಡುವ NOC ಗಳಲ್ಲಿನ ಷರತ್ತುಗಳೊಂದಿಗೆ ಪರಿಶೀಲಿಸಿಕೊಳ್ಳತಕ್ಕದ್ದು. |

Scanned with CamScanner

Scanned with CamScanner

| | |
|---|---|
| 9 | ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ಪರಿಶೀಲಿಸಿಕೊಳ್ಳತಕ್ಕದ್ದು. |
| 10 | ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿನಕ್ಷೆಯನ್ನು ಮಾರ್ಪಾಡುಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 11 | ದಿನಾಂಕ: 16/1/2010 ರಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ ದಿನಾಂಕ: 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ:09/2011ರ ತೀರ್ಮಾನದಂತೆ ಅಭಿವೃದ್ಧಿನಕ್ಷೆಯಲ್ಲಿ Arrangement of Blocks ಗಳನ್ನು ವಲಯನಿಯಮಾವಳಿಗಳಂತೆ ಪರಿಶೀಲಿಸಲಾಗಿದ್ದು, ಕಟ್ಟಡನಕ್ಷೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಪರಿಶೀಲಿಸಿರುವುದಿಲ್ಲ. ಇದನ್ನು ಕಟ್ಟಡನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರವು ವಿವಿಧ ಇಲಾಖೆಗಳಿಂದ NOC ಗಳನ್ನು ಮತ್ತು ಇನ್ನಿತರೇ ಅರ್ಜಿದಾರರಿಂದ ಪಡೆದು ನಿಯಮಾನುಸಾರ ಪರಿಶೀಲಿಸಿಕೊಳ್ಳತಕ್ಕದ್ದು. |
| 12 | ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ / ದಾಖಲಾತಿ ನೀಡಿ, ಅನುಮೋದನೆ ಪಡೆದು ಈ ಕುರಿತಂತೆ ನ್ಯಾಯಾಲಯದಲ್ಲಿ ತಕರಾರು ಉದ್ಭವವಾದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯನ್ನು ರದ್ದುಗೊಳಿಸುವ ಅಥವಾ ಹಿಂಪಡೆಯುವ ಅಧಿಕಾರವನ್ನು ಪ್ರಾಧಿಕಾರದ ಆಯುಕ್ತರು ಅಧಿಕಾರವುಳ್ಳರಾಗಿರುತ್ತಾರೆ. |
| 13 | ಅಭಿವೃದ್ಧಿ ಯೋಜನೆಯಲ್ಲಿನ ವಸತಿ ಘಟಕಗಳಿಂದ ಉತ್ಪತ್ತಿಯಾಗುವ ಘನತ್ಯಾಜ್ಯಗಳ ವಿಂಗಡನೆ ಮತ್ತು ಶೇಖರಣೆಗಾಗಿ ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 14 | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಮಳೆ ನೀರು ಕೋಯ್ಲಿಗೆ ಸಂಬಂಧೀಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 15 | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ BESCOM ನಿರ್ದೇಶನದಂತೆ ಎಲೆಕ್ಟ್ರಿಕ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು. |
| 16 | ಯೋಜನೆಯಲ್ಲಿನ ವಸತಿ ಘಟಕಗಳಿಗೆ ಕುಡಿಯುವ ನೀರಿಗಾಗಿ ಮತ್ತು ಇತರ ಉಪಯೋಗದ ನೀರಿಗಾಗಿ ಪ್ರತ್ಯೇಕವಾದ ಜೋಡಿ ಕೊಳಾಯಿ ವ್ಯವಸ್ಥೆಯನ್ನು ಮಾಡತಕ್ಕದ್ದು. ವಸತಿ ಘಟಕಗಳಿಂದ ಬರುವ ಕೊಳಚೆ ನೀರನ್ನು ಸಂಸ್ಕರಣೆ ಮಾಡಲು ಯೋಜನೆಯಲ್ಲಿ ಸಂಸ್ಕರಣಾ ಘಟಕ ಸ್ಥಾಪಿಸಿ, ಸಂಸ್ಕರಿಸಿದ ನೀರನ್ನು ಇತರ ಉಪಯೋಗಗಳಿಗಾಗಿ ಉಪಯೋಗಿಸತಕ್ಕದ್ದು. |
| 17 | BWSSB,BESCOM, KSPCB, ವಾಯುಯಾನ ಪ್ರಾಧಿಕಾರ, ಅಗ್ನಿಶಾಮಕ ಇಲಾಖೆ ಗಳಿಂದ NOC ಪಡೆದು ಕಟ್ಟಡ ನಕ್ಷೆ ಅನುಮೋದನೆ ಮೊದಲು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸಬೇಕಿರುತ್ತದೆ. |
| 18 | ಪ್ರಶ್ನಿತ ಪ್ರದೇಶದಲ್ಲಿ ಹಾದು ಹೋಗುವ ಹಳ್ಳ ಕೊಳ್ಳಗಳ ನೀರಿನ ಹರಿವಿಗೆ ಅಡಚಣೆ ಉಂಟು ಮಾಡದೆ ಸರಾಗವಾಗಿ ಹಾದು ಹೋಗುವಂತೆ ಅಭಿವೃದ್ಧಿ ಪಡಿಸುವುದು. |

Scanned with CamScanner

| | |
|---|---|
| 19 | ಸಕ್ಷಮ ಪ್ರಾಧಿಕಾರದ ಅಭಿಯಂತರ ವಿಭಾಗದವರು ಕೆರೆ / ನಾಲಾ, ರೈಲ್ವೆ Buffer ಗಾಗಿ ಕಾಯ್ದಿರಿಸಿರುವ ಜಾಗಗಳನ್ನು ಯಥಾವತ್ತಾಗಿ ಸ್ಥಳದಲ್ಲಿ ಕಾಯ್ದಿರಿಸಲಾಗಿದೆಯೇ ಎಂಬುದರ ಬಗ್ಗೆ ಪರಿಶೀಲಿಸಿಕೊಂಡು ಬಫರ್ ಜಾಗದಲ್ಲಿ ಯಾವುದೇ ಒತ್ತುವರಿ/ನಿರ್ಮಾಣಗಳು ಬಾರದಂತೆ ಕಟ್ಟುನಿಟ್ಟಿನ ಕ್ರಮ ಜರುಗಿಸತಕ್ಕದ್ದು. |
| 20 | ಪ್ರಾಧಿಕಾರದ ಭೂ ಸ್ವಾಧೀನ ವಿಭಾಗದವರು ದೃಢೀಕರಿಸಿರುವ ಸರ್ವೆ ನಕ್ಷೆಯಲ್ಲಿನ ಖರಾಬು ವಿಸ್ತೀರ್ಣ ಪರಿಚಲನೆಗಳನ್ನು ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಅಳವಡಿಸಿರುವಂತೆ ಸ್ಥಳದಲ್ಲಿ ಕಾಯ್ದಿರಿಸಲು ಬದ್ಧರಿರತಕ್ಕದ್ದು. |
| 21 | ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಆಯುಕ್ತರು,
ಬೆಂಅಪ್ರಾ, ಬೆಂಗಳೂರು.

ಇವರಿಗೆ

ಮುಖ್ಯ ಅಭಿಯಂತರರು,
ರಾಜೀವ್ ಗಾಂಧಿ ವಸತಿ ನಿಯಮ ನಿಗಮಿತ,
ಕಾವೇರಿ ಭವನ, 09 ನೇ ಮಹಡಿ E & F ಬ್ಲಾಕ್,
ಕೆಂಪೇಗೌಡ ರಸ್ತೆ, ಬೆಂಗಳೂರು 560 009.

Scanned with CamScanner